ಉದ್ಯೋಗ ಖಾತ್ರಿ ಯೋಜನೆಯ ಕಾಮಗಾರಿಗಳ ಹಣ ಪಾವತಿ

493 (217) ಶ್ರೀ ಮಾಲೀಕಯ್ಯ ವೆಂಕಯ್ಯ ಗುತ್ತೇದಾರ್ (ಅಫ್ಜಲ್‌ಪುರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯಲ್ಲಿ ಉದ್ಯೋಗ ಖಾತರಿ ಯೋಜನೆಗೆ ಅಡಿಯಲ್ಲಿ ಕಡು ಬಡವರು ಬಹಳಷ್ಟು ಕಾಮಗಾರಿಗಳನ್ನು ನಿರ್ವಹಿಸಿದ್ದು, ಪಂಚಾಯಿತಿ ಕಾರ್ಯದರ್ಶಿಗಳ ನಿರ್ಲಕ್ಷತನದಿಂದ ಕೂಲಿ ಕಾರ್ಮಿಕರಿಗೆ ಹಣ ಪಾವತಿ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕೂಲಿ ಕಾರ್ಮಿಕರ ಬೇಡಿಕೆಯನ್ನು ಸರ್ಕಾರ ಈಡೇರಿಸುತ್ತದೆಯೇ; ಅಲ್ಲದೇ ಯಾವಾಗ ಹಣ ಪಾವತಿಸಲಾಗುವುದು ಮತ್ತು ಕಾರ್ಯದರ್ಶಿಗಳ ಮೇಲೆ ಸರ್ಕಾರ ಕೈಗೊಳ್ಳಲಾಗುವ ಕ್ರಮಗಳೇನು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಬಂದಿದೆ.

ಆ) ಪ್ರಸ್ತುತ ಆರ್ಥಿಕ ವರ್ಷದಲ್ಲಿ ಯೋಜನೆಯಡಿ ಕೆಲಸ ನಿರ್ವಹಿಸಿರುವ ಎಲ್ಲಾ ನೋಂದಾಯಿತ ಕಾರ್ಮಿಕರಿಗೂ ನಿಗಧಿತ ಅವಧಿಯಲ್ಲಿ ಕೂಲಿ ಹಣ ಪಾವತಿಸಲು ಕ್ರಮವಹಿಸಿದೆ. ಆದರೆ 2009–10ನೇ ಸಾಲಿನಲ್ಲಿ ಕೆಲವು ಕಾರ್ಮಿಕರು ಕೆಲಸ ನಿರ್ವಹಿಸಿದ್ದು, ಹಣ ಪಾವತಿಸಿಲ್ಲವೆಂದು ದೂರು ನೀಡಿರುತ್ತಾರೆ, ಈ ಸಂಬಂಧ ಸೂಕ್ತ ಪರಿಶೀಲನೆ ನಡೆಸಿ ಮಾರ್ಗಸೂಚಿಗಳನ್ವಯ ಹಣ ಪಾವತಿಸಲು ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ, ಮುಖ್ಯ ಕಾರ್ಯನಿವಾಹಕ ಅಧಿಕಾರಿಯವರಿಗೆ ತಿಳಿಸಿದೆ. ಮುಂದುವರೆದು ಯೋಜನೆಯಡಿ ಇಂತಹ ಯಾವುದೇ ದೂರುಗಳು ಇದ್ದರು ಕೂಡ ಸ್ಥಳೀಯವಾಗಿ ಬಗೆಹರಿಸುವ ನಿಟ್ಟಿನಲ್ಲಿ ಈಗಾಗಲೇ ಗುಲ್ಬರ್ಗಾ ಜಿಲ್ಲೆಯಲ್ಲಿ ಓಂಬಡ್ಸ್‌ಮನ್ ಅವರನ್ನು ನೇಮಕ ಮಾಡಿದ್ದು, ಜಿಲ್ಲಾ ಮಟ್ಟದಲ್ಲಿ ಈ ಕುರಿತು ದೂರು ನಿವಾರಣೆಗೆ ಕ್ರಮವಹಿಸಲಾಗಿದೆ.